# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 125 (198) |
| ಸದಸ್ಯರ ಹೆಸರು | : | ಡಾ: ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |
| ಉತ್ತರಿಸುವ ದಿನಾಂಕ | : | 10.12.2024 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಶಿವಮೊಗ್ಗ ಜಿಲ್ಲೆ ಸೇರಿದಂತೆ ಅಡಿಕೆ ಬೆಳೆಯುವ ಮಲೆನಾಡು ಪ್ರದೇಶಗಳಲ್ಲಿ ಅಡಿಕೆ ತೋಟಗಳಲ್ಲಿ ಅಡಿಕೆ ಕೊಳೆ ರೋಗ ವ್ಯಾಪಕವಾಗಿ ಕಾಣಿಸಿಕೊಂಡಿದ್ದು, ಅಡಿಕೆ ಬೆಳೆಗಾರರಲ್ಲಿ ಆತಂಕ ಮೂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ಅಡಿಕೆ ಕೊಳೆ ರೋಗ ನಿರ್ಮೂಲನೆಗೆ ಸರ್ಕಾರ ಕೈಗೊಂಡ ಕ್ರಮಗಳೇನು; | ಅಡಿಕೆ ಕೊಳೆ ರೋಗ ನಿರ್ಮೂಲನೆಗೆ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:-<br>1. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆಗಾಗಿ ಘಟಕ ವೆಚ್ಚದ ರೂ.4000 ಗಳಲ್ಲಿ ಶೇ.30 ರಂತೆ, ಪ್ರತಿ ಹೆಕ್ಟೇರ್ ಗೆ ರೂ.1200 ರಂತೆ 4 ಹೆಕ್ಟೇರ್ ವರೆಗೆ ಗರಿಷ್ಠ ರೂ. 4800 ಗಳ ಸಹಾಯಧನ ನೀಡಲಾಗುತ್ತಿದೆ.<br><br>2. ಪ್ರಸಕ್ತ ಸಾಲಿನಲ್ಲಿ ಒಟ್ಟು ರೂ. 402 ಲಕ್ಷಗಳ ಅನುದಾನ ಒದಗಿಸಲಾಗಿದ್ದು, ಶಿವಮೊಗ್ಗ ಜಿಲ್ಲೆಗೆ ರೂ.12.12 ಲಕ್ಷಗಳು ಮತ್ತು ಇತರೆ ಮಲೆನಾಡು ಜಿಲ್ಲೆಗಳಾದ ಚಿಕ್ಕಮಗಳೂರು ಜಿಲ್ಲೆಗೆ ರೂ. 12.00 ಲಕ್ಷಗಳು ಹಾಗೂ ಹಾಸನ ಜಿಲ್ಲೆಗೆ ರೂ.18.00 ಲಕ್ಷಗಳಿಗೆ ಒಟ್ಟಾರೆ, 3080 ಹೆಕ್ಟೇರ್ ಪ್ರದೇಶದಲ್ಲಿ ಅಡಿಕೆ ಬೆಳೆಗಾರರಿಗೆ ಸಹಾಯಧನ ನೀಡಲಾಗಿರುತ್ತದೆ. |

| | | |
|---|---|---|
| | | 3. ಪ್ರಸಕ್ತ ಸಾಲಿನಲ್ಲಿ ತೋಟಗಾರಿಕೆ ಬೆಳೆಗಳ ಕೀಟ ಮತ್ತು ರೋಗಗಳ ಸಮಗ್ರ ನಿಯಂತ್ರಣ ಯೋಜನೆಯಡಿ ಘಟಕ ವೆಚ್ಚ ಪ್ರತಿ ಹೆಕ್ಟೇರ್‌ಗೆ ರೂ.10,000/- ಗಳಲ್ಲಿ ಸಾಮಾನ್ಯ ವರ್ಗದವರಿಗೆ ಶೇ.75 ರಂತೆ ರೂ.7,500/- ಹಾಗೂ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರಿಗೆ ಶೇ. 90ರಷ್ಟು ರೂ. 9,000/- ಗಳಂತೆ ಸಸ್ಯ ಸಂರಕ್ಷಣೆ ಔಷಧಿಗಳ ಸಹಾಯಧನ /ಖರೀದಿಗೆ ಒಟ್ಟು ರೂ. 500.00 ಲಕ್ಷಗಳ ಅನುದಾನ ಒದಗಿಸಲಾಗಿದೆ.<br><br>4. ಈ ಅನುದಾನದಲ್ಲಿ ಶಿವಮೊಗ್ಗ ಜಿಲ್ಲೆಗೆ ರೂ.40.00 ಲಕ್ಷಗಳು, ಚಿಕ್ಕಮಗಳೂರು ಜಿಲ್ಲೆಗೆ ರೂ. 40.00 ಲಕ್ಷಗಳು ಹಾಗೂ ಹಾಸನ ಜಿಲ್ಲೆಗೆ ರೂ.52.00 ಲಕ್ಷಗಳಿಗೆ ಒಟ್ಟಾರೆ ಅಂದಾಜು 1805 ಹೆಕ್ಟೇರ್ ಪ್ರದೇಶದಲ್ಲಿ 2050 ಅಡಿಕೆ ಬೆಳೆಗಾರರಿಗೆ ಸಹಾಯಧನ ನೀಡಲಾಗಿರುತ್ತದೆ.<br>5. ಜಿಲ್ಲೆ/ತಾಲ್ಲೂಕು/ಹೋಬಳಿ ಮಟ್ಟದಲ್ಲಿ ರೈತರಿಗೆ ಕ್ಷೇತ್ರೋತ್ಸವ/ತರಬೇತಿ/ ಕಾರ್ಯಾಗಾರ/ ವಿಚಾರ ಸಂಕೀರ್ಣಗಳನ್ನು ಏರ್ಪಡಿಸುವ ಮೂಲಕ ತೋಟಗಾರಿಕೆ ಬೆಳೆಗಳ ಕುರಿತು ತಾಂತ್ರಿಕ ಮಾಹಿತಿ, ಕೀಟ ಬಾಧೆ ರೋಗಗಳ ನಿರ್ವಹಣಾ ಕ್ರಮಗಳು ಹಾಗೂ ಮುಂಜಾಗ್ರತಾ ಕ್ರಮಗಳ ಕುರಿತು ಮಾಹಿತಿ ನೀಡಲಾಗುತ್ತಿದೆ.<br>6. ಶಿವಮೊಗ್ಗದ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ತಜ್ಞರು ಹಾಗೂ ಇಲಾಖೆಯ ಅಧಿಕಾರಿಗಳ ಸಹಯೋಗದೊಂದಿಗೆ ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕೈಗೊಳ್ಳಲಾಗುತ್ತಿದೆ.<br>7. ಹೋಬಳಿ ಮಟ್ಟದ ರೈತ ಸಂಪರ್ಕ ಕೇಂದ್ರಗಳಲ್ಲಿನ ಸಹಾಯಕ ತೋಟಗಾರಿಕೆ ಅಧಿಕಾರಿಗಳು ಈ ಬೆಳೆ ಕುರಿತಾದ ತಾಂತ್ರಿಕ ಮಾಹಿತಿಯನ್ನು ಗ್ರಾಮ ಸಭೆಗಳ ಮೂಲಕ ಹಾಗೂ ರೈತರ ತಾಕುಗಳಿಗೆ ಭೇಟಿ ನೀಡುವ ಸಂದರ್ಭದಲ್ಲಿ ಒದಗಿಸುತ್ತಿರುತ್ತಾರೆ. |

| | | |
|---|---|---|
| ಇ) | ಕೊಳೆ ರೋಗದಿಂದ ಹಾನಿಗೊಳಗಾದ ರೈತರಿಗೆ ಸರ್ಕಾರ ಯಾವ ರೀತಿ ಪರಿಹಾರ ನೀಡಲಿದೆ? (ವಿವರ ಒದಗಿಸುವುದು) | ಕೊಳೆ ರೋಗದಿಂದ ಹಾನಿಗೊಳಗಾದ ರೈತರಿಗೆ ಪರಿಹಾರ ನೀಡುವ ಯಾವುದೇ ಕಾರ್ಯಕ್ರಮ ಇಲಾಖೆಯಲ್ಲಿ ಇರುವುದಿಲ್ಲ. |

HORTI 493 HGM 2024

**(ಎಸ್. ಎಸ್. ಮಲ್ಲಿಕಾರ್ಜುನ್)**
ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಇಲಾಖೆ